ಆ) ಮತ್ತು ಇ) ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯದ ಕಾರ್ಯವ್ಯಾಪ್ತಿಯ ರಾಜ್ಯದ 12 ಜಿಲ್ಲೆಗಳಲ್ಲಿ ಅಂದರೆ, ಬಿಜಾಪುರ, ಬಾಗಲಕೋಟೆ, ಧಾರವಾಡ, ಹಾವೇರಿ, ಗದಗ, ಬೆಳಗಾವಿ, ಉತ್ತರ ಕನ್ನಡ, ಗುಲ್ಬರ್ಗಾ, ಬಳ್ಳಾರಿ, ಬೀದರ್, ರಾಯಚೂರು ಮತ್ತು ಕೊಪ್ಪಳಗಳಿಗೆ ವ್ಯಾಪಿಸಿದೆ ಈ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಮಹಿಳಾ ಕಾಲೇಜುಗಳು ಸದರಿ ವಿಶ್ವವಿದ್ಯಾಲಯದ ಸಂಯೋಜಿತ್ವವನ್ನು ಹೊಂದಿರುತ್ತದೆ ಈ ವಿಶ್ವವಿದ್ಯಾಲಯವನ್ನು ಮಹಿಳೆಯರ ಸಬಲೀಕರಣಕ್ಕಾಗಿ ಹಾಗೂ ಈ ಭಾಗದ ಮಹಿಳೆಯರಿಗೆ ಉನ್ನತ ಶಿಕ್ಷಣವನ್ನು ನೀಡುವ ಮೂಲ ಉದ್ದೇಶದಿಂದ ಸ್ಥಾಪಿಸಲಾಗಿದೆ

ಇ) ಪ್ರಸ್ತುತ ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ

473(678) ಶ್ರೀ ಬಸವರಾಜ ರಾಯರೆಡ್ಡಿ (ಯಲಬುರ್ಗ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ ಸರ್ಕಾರದ ಪ್ರಥಮ ದರ್ಜೆ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪದವಿ ಕಾಲೇಜುಗಳು ಯಾವ ಯಾವ ಜಿಲ್ಲೆಯಲ್ಲಿ ಎಷ್ಟು ಇವೆ,

ಆ) ಇವುಗಳಿಗೆ ಮಂಜೂರಾದ ಉಪನ್ಯಾಸಕರ ಹಾಗೂ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು,

ಇ) ಇವುಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ, ಹಾಗೂ ಇವುಗಳನ್ನು ಭರ್ತಿ ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಅನುಬಂಧದಲ್ಲಿ ಲಗತ್ತಿಸಿದೆ

ಆ) ಮಂಜೂರಾದ ಉಪನ್ಯಾಸಕರ ಸಂಖ್ಯೆ 3307 ಮಂಜೂರಾದ ಬೋಧಕೇತರ ಹುದ್ದೆಗಳ ಸಂಖ್ಯೆ 1043, ಮಂಜೂರಾದ ಗ್ರೂಪ್-ಡಿ ಹುದ್ದೆಗಳ ಸಂಖ್ಯೆ 1399

ಇ) ಇಲಾಖೆಯಲ್ಲಿ ಒಟ್ಟು 792 ಉಪನ್ಯಾಸಕರ ಹುದ್ದೆಗಳು, ಗ್ರೂಪ್–ಸಿ 369 ಹುದ್ದೆಗಳು ಹಾಗೂ ಗ್ರೂಪ್–ಡಿ 390 ಹುದ್ದೆಗಳು ಖಾಲಿ ಇರುತ್ತವೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿವಿಧ ವಿಷಯಗಳಲ್ಲಿ ಖಾಲಿ ಇರುವ 610 ಉಪನ್ಯಾಸಕರ ಹುದ್ದೆಗಳನ್ನು ತುಂಬಲು ಕರ್ನಾಟಕ ಲೋಕ ಸೇವಾ ಆಯೋಗದಿಂದ ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ ಖಾಲಿ ಇರುವ ಬೋಧಕೇತರ ಹುದ್ದೆಗಳನ್ನು ಮುಂದೆ ಬಡ್ತಿ ಮತ್ತು ನೇರ ನೇಮಕಾತಿಯಿಂದ ಖಾಲಿ ಹುದ್ದೆಗಳನ್ನು ತುಂಬಲಾಗುವುದು